**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ, ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) ಮತ್ತು ಶ್ರೀ ಬಸನಗೌಡ ಬಾದರ್ಲಿ ಇವರುಗಳು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ: 140ಕ್ಕೆ ಉತ್ತರ**

**ಪ್ರಸ್ತಾಪಿಸಿರುವ ವಿಷಯ:**

ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಿ ಆರ್ಥಿಕ ಇಲಾಖೆಯು ಹಲವು ಇಲಾಖೆಗಳ ನೌಕರರಿಗೆ ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಯನ್ನು ಅನುಮೋದನೆ ಆದೇಶ ಹೊರಡಿಸಲಾಗಿದೆ. ಬೆಂಗಳೂರು ನೀರು ಸರಬರಾಜು ಮಂಡಳಿಯ ನೌಕರರಿಗೂ ಸಹ ಹಳೆಯ ಪಿಂಚಣಿ ಯೋಜನೆಯನ್ನು ವಿಸ್ತರಿಸಿ ಆದೇಶ ಹೊರಡಿಸಲಾಗಿದೆ. ಅದೇ ರೀತಿ ವಿಶ್ವವಿದ್ಯಾಲಯಗಳಲ್ಲಿ ದಿನಾಂಕ:01.04.2006ರ ಪೂರ್ವದಲ್ಲಿ ನೇಮಕಾತಿ ಅಧಿಸೂಚನೆಗಳ ಮೂಲಕ ಅಥವಾ ಆ ದಿನಾಂಕದಂದು ಅಥವಾ ನಂತರದಲ್ಲಿ ವಿಶ್ವವಿದ್ಯಾಲಯದ ಸೇವೆಗೆ ಸೇರಿರುವ ನೌಕರರಿಗೆ ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಗೆ ಅನುಮೋದನೆ ನೀಡಿ ಆದೇಶ ಹೊರಡಿಸಬೇಕೆಂಬ ವಿಷಯವನ್ನು ನಿಯಮ 72ರಲ್ಲಿ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುತ್ತೇವೆ.

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ರಾಜ್ಯದ ಸ್ವಾಯತ್ತ ಸಂಸ್ಥೆಗಳು, ನಿಗಮ-ಮಂಡಳಿಗಳು, ಸಂಘಗಳು, ವಿಶ್ವವಿದ್ಯಾನಿಲಯಗಳು, ರಾಜ್ಯದ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೂ ಸಹ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ: 01.04.2006 ರಿಂದ ಜಾರಿಗೆ ಬರುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015ರಲ್ಲಿ ವಿಸ್ತರಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/99/2023, ದಿನಾಂಕ: 24.01.2024ರಲ್ಲಿ ದಿನಾಂಕ: 01.04.2006ರ ಪೂರ್ವದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಿದ ನೇಮಕಾತಿ ಅಧಿಸೂಚನೆಗಳ ಮೇರೆಗೆ ಆಯ್ಕೆ ಹೊಂದಿ, ದಿನಾಂಕ: 01.04.2006ರಂದು ಅಥವಾ ಆ ದಿನಾಂಕದ ನಂತರ ಸೇವೆಗೆ ಸೇರಿರುವ ಕಾರಣದಿಂದ ನೂತನ ಅಂಶದಾಯಿ ಕೊಡುಗೆ ಯೋಜನೆಯ (ರಾಷ್ಟ್ರೀಯ ಪಿಂಚಣಿ ಯೋಜನೆ) ವ್ಯಾಪ್ತಿಗೊಳಪಟ್ಟಿರುವ **ಸರ್ಕಾರಿ ನೌಕರರನ್ನು** ಸರ್ಕಾರವು ಅವರ ಅಭಿಮತದ ಮೇರೆಗೆ ಕೆಲವು ಷರತ್ತುಗಳಿಗೊಳಪಟ್ಟು ಒಂದು ಬಾರಿಯ ಕ್ರಮವಾಗಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಲು ಒಪ್ಪಿಗೆ ನೀಡಿ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/99/2023, ದಿನಾಂಕ:24.01.2024ರ ಸರ್ಕಾರದ ಆದೇಶವು ರಾಜ್ಯ ಸರ್ಕಾರದಿಂದ ಸ್ಥಾಪಿತವಾದ ಸ್ವಾಯತ್ತತಾ ಸಂಸ್ಥೆಗಳಾದ ನಗರಸಭೆ, ಪುರಸಭೆ, ನಿಗಮ-ಮಂಡಳಿಗಳು, ಸ್ಥಳೀಯ ಸಂಸ್ಥೆಗಳು, ವಿಶ್ವವಿದ್ಯಾಲಯಗಳು ಮತ್ತು ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಅನ್ವಯಿಸುವುದಿಲ್ಲ.

ರಾಜ್ಯದಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ / ಮಾರ್ಪಾಡು ಮಾಡಲು ಸಮಗ್ರವಾಗಿ ಪರಿಶೀಲಿಸಲು ಈಗಾಗಲೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 11.12.2018ರ ಮತ್ತು ದಿನಾಂಕ: 01.03.2023 ರ ಸರ್ಕಾರಿ ಆದೇಶಗಳನ್ವಯ ರಚಿಸಲಾಗಿರುವ ಸಮಿತಿಯನ್ನು ದಿನಾಂಕ: 16.08.2024ರಲ್ಲಿ ಪುನರ್ ರಚಿಸಿ ಆದೇಶಿಸಲಾಗಿದ್ದು, ಸದರಿ ಸಮಿತಿಯ ವರದಿಯು ನಿರೀಕ್ಷಣೆಯಲ್ಲಿ ಇರುತ್ತದೆ.

**ಸಂಖ್ಯೆ: ಆಇ-ಪಿಇಎನ್/75/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿ